ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

11

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 19/11/20

# ಬಿಎಸ್‌ವೈ ಬರಿಗೈಲಿ ವಾಪಸ್

19/11/20

- ಕಾಲಾವಕಾಶ ಕೇಳಿದ ವರಿಷ್ಠರು
- ಸಂಪುಟ ವಿಸ್ತರಣೆ ಮತ್ತೆ ನನೆಗುದಿಗೆ
- ಸಚಿವಾಕಾಂಕ್ಷಿ ಶಾಸಕರಲ್ಲಿ ಭಾರಿ ನಿರಾಸೆ

**ಸಂ.ಕ.ಸಮಾಚಾರ ಬೆಂಗಳೂರು**

ರಾಜ್ಯ ಸಚಿವ ಸಂಪುಟದ ವಿಸ್ತರಣೆ ಕುರಿತಂತೆ ಪಕ್ಷದ ವರಿಷ್ಠರ ಜತೆ ಚರ್ಚಿಸಲು ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಬುಧವಾರ ತಡರಾತ್ರಿಯೇ ಬರಿಗೈಲಿ ವಾಪಸಾಗಿದ್ದಾರೆ. ಇದರಿಂದ ಸಚಿವ ಸಂಪುಟ ಸೇರುವ ಉತ್ಸಾಹದಲ್ಲಿದ್ದ ಹಲವಾರು ಸಚಿವಾಕಾಂಕ್ಷಿಗಳಿಗೆ ಭಾರಿ ನಿರಾಸೆಯಾಗಿದೆ.



ದೆಹಲಿಯಲ್ಲಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರನ್ನು ಸಿಎಂ ಯಡಿಯೂರಪ್ಪ ಬುಧವಾರ ಮಧ್ಯಾಹ್ನ ನಡ್ಡಾ ಅವರ ನಿವಾಸದಲ್ಲೇ ಭೇಟಿ ಮಾಡಿದರು. ಈ ವೇಳೆ ಸುಮಾರು 10 ನಿಮಿಷಗಳ ನಡುವೆ ಮಾತುಕತೆ ನಡೆಯಿತು. ಈ ವೇಳೆ ಸಿಎಂ ಯಡಿಯೂರಪ್ಪ ಅವರು ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಕುರಿತಂತೆ ಸಲಹೆ ನೀಡುವಂತೆ ಮನವಿ ಮಾಡಿದರು ಎನ್ನಲಾಗಿದೆ. ಆದರೆ ಈ ಬಗ್ಗೆ ಸ್ಪಷ್ಟ ಪ್ರತಿಕ್ರಿಯೆ ನೀಡಿದೇ ಎರಡು-ಮೂರು ದಿನಗಳಲ್ಲಿ ಈ ಬಗ್ಗೆ ತಿಳಿಸಲಾಗುವುದು ಎಂದು ಮಾತ್ರ ಹೇಳಿದ್ದಾರೆ ಎನ್ನಲಾಗಿದೆ. ಮಾತುಕತೆ ವೇಳೆ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ಹಾಜರಿದ್ದರು.

ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿಎಂ ಯಡಿಯೂರಪ್ಪ, ನಡ್ಡಾ ಅವರು ಮಾತುಕತೆ ವೇಳೆ ಸೂಕ್ತವಾಗಿ ಸ್ಪಂದಿಸಿದ್ದಾರೆ. ಎರಡು-ಮೂರು ದಿನಗಳಲ್ಲಿ ಸಂಪುಟದ ಬಗೆಗೆ ತೀರ್ಮಾನ ತಿಳಿಸಲಿದ್ದಾರೆ. ಅವರು ತೀರ್ಮಾನ ತಿಳಿಸಿದ ನಂತರ ಮುಂದಿನ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಜೆ.ಪಿ.ನಡ್ಡಾ ಅವರು ಮುಂದಿನ ತಿಂಗಳು ದೇಶಾದ್ಯಂತ ಎಲ್ಲ ರಾಜ್ಯಗಳಿಗೆ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಕರ್ನಾಟಕಕ್ಕೂ ಬರುವಂತೆ ಆಹ್ವಾನ ನೀಡಿದ್ದೇನೆ. ದೇಶದಲ್ಲಿ ಬಿಜೆಪಿ ಸಂಘಟನೆಗೆ ನಡ್ಡಾ ಅವರು ಶ್ರಮಿಸುತ್ತಿದ್ದಾರೆ. ಮುಂದಿನ ಬಾರಿಯೂ ನರೇಂದ್ರ ಮೋದಿ ಅವರೇ ಮತ್ತೊಮ್ಮೆ ದೇಶದ ಪ್ರಧಾನಿ ಆಗಬೇಕೆಂಬುದು ನಮ್ಮ ಗುರಿ. ಆ ನಿಟ್ಟಿನಲ್ಲಿ ಎಲ್ಲರೂ ಶ್ರಮಿಸುತ್ತೇವೆ ಎಂದೂ ಹೇಳಿದರು.

ಆದರೆ ರಾಜ್ಯ ಸಚಿವ ಸಂಪುಟದ ವಿಸ್ತರಣೆ ಬಗೆಗೆ ಸ್ಪಷ್ಟ ಅನುಮತಿ ಪಡೆದು ಬರುವ ಶುಕ್ರವಾರ ಇಲ್ಲವೇ ಸೋಮವಾರ ಸಂಪುಟ ವಿಸ್ತರಣೆ ಮಾಡುವ ಉತ್ಸಾಹದಲ್ಲಿದ್ದ ಸಿಎಂ ಯಡಿಯೂರಪ್ಪ ಅವರ ನಿರೀಕ್ಷೆಗೆ ತಕ್ಕಂತೆ ವರಿಷ್ಠರಿಂದ ಸ್ಪಂದನೆ ಸಿಕ್ಕಿಲ್ಲ. ಹೀಗಾಗಿ ನಿರಾಸೆಯಿಂದಲೇ ವಾಪಸಾಗಿರುವ ಸಿಎಂ ಯಡಿಯೂರಪ್ಪ, ವರಿಷ್ಠರ ಮುಂದಿನ ನಡೆಗಾಗಿ ಕಾದು ನೋಡಬೇಕಾಗಿದೆ. ಈ ಬೆಳವಣಿಗೆ ಯಡಿಯೂರಪ್ಪ ವಲಯದಲ್ಲಿ ಕೆಲಮಟ್ಟಿನ ನಿರಾಸೆಗೆ ಕಾರಣವಾಗಿದೆ.

ಮತ್ತೊಂದೆಡೆ ಒಂದೆರಡು ದಿನಗಳಲ್ಲಿ ಸಂಪುಟ ಪುನಾರಚನೆ ಆಗಿಯೇ ಬಿಡುತ್ತದೆ ಎಂಬ ಭಾವಿಸಿದ್ದ 20ಕ್ಕೂ ಹೆಚ್ಚು ಸಚಿವಾಕಾಂಕ್ಷಿ ಶಾಸಕರುಗಳಿಗೆ ವರಿಷ್ಠರ ನಡೆ ದಿಗಿಲು ಹುಟ್ಟಿಸಿದೆ. ಸ್ವತಃ ರಾಷ್ಟ್ರೀಯ ವರಿಷ್ಠರೇ ಎರಡು-ಮೂರು ದಿನಗಳ ಬಳಿಕ ನೋಡೋಣ ಎಂಬ ಸಂದೇಶ ರವಾನಿಸಿರುವುದು ಸಂಪುಟ ವಿಸ್ತರಣೆ ಸಾಕಷ್ಟು ವಿಳಂಬ ಆಗಲಿದೆ ಎಂಬ ಆತಂಕ ಶಾಸಕರಲ್ಲಿ ಮೂಡಿದೆ.

ಸಿಎಂ ಯಡಿಯೂರಪ್ಪ ದೆಹಲಿಗೆ ಭೇಟಿ ನೀಡಿದ ವೇಳೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ದೆಹಲಿಯಲ್ಲಿ ಇರಲಿಲ್ಲ ಎನ್ನಲಾಗಿದೆ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಡ್ಡಾ ಅವರು ಶಾ ಮತ್ತು ಸಂತೋಷ್ ಜತೆ ಚರ್ಚಿಸಿದ ಬಳಿಕವಷ್ಟೇ ಸಿಎಂ ಯಡಿಯೂರಪ್ಪ ಅವರಿಗೆ ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಕುರಿತಂತೆ ಸ್ಪಷ್ಟ ಸಂದೇಶ ರವಾನಿಸುವ ಸಾಧ್ಯತೆಗಳಿವೆ. ಆದರೆ ಅದು ಯಾವಾಗ ಎಂಬುದೇ ಈಗ ಎಲ್ಲರನ್ನೂ ಕಾಡುತ್ತಿರುವ ಪ್ರಶ್ನೆಯಾಗಿದೆ.